ಸಮಾಜ ಕಲ್ಯಾಣ ಇಲಾಖೆಯಲ್ಲಿನ ದುರುಪಯೋಗದ ಪ್ರಕರಣಗಳ ಬಗ್ಗೆ

4604 (5378) : ಶ್ರೀ ಸಿ. ಚೆನ್ನಿಗಪ್ಪ (ಕೊರಟಗೆರೆ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಸಂ:ಸಿ.ಆ.ಸು.ಇ.18. ಸೇ.ಇ.ವಿ. 2001ರ ವಿವರಗಳೇನು; ಅದರನ್ವಯ ಸರ್ಕಾರದವರು ಜರುಗಿಸಿದ ಕ್ರಮಗಳೇನು; ಯಾವ ಅಧಿಕಾರಿಗಳನ್ನು ಸುತ್ತೋಲೆಯನ್ವಯ ಆಪಾದಿತರೆಂದು ಗುರುತಿಸಲಾಗಿದೆ?

ಆ) ಆಪಾದಿತರು ದುರುಪಯೋಗಪಡಿಸಿಕೊಂಡ ಹಣದ ಮೊತ್ತ ಎಷ್ಟು; ದುರುಪಯೋಗವು ಸಾಬೀತಾದ ನಂತರ ಮುಂದೆ ಕೈಗೊಂಡ ಸೂಕ್ತ ಕಾನೂನಿನ ಕ್ರಮಗಳೇನು; (ವಿವರ ನೀಡುವುದು)?

ಇ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸಿಗಬೇಕಾದ ಸೌಲಭ್ಯಗಳನ್ನು ದುರುಪಯೋಗ ಮಾಡಿಕೊಳ್ಳುವ ಇಂತಹ ಅಧಿಕಾರಿಗಳ ವಿರುದ್ಧ ಸಾರ್ವಜನಿಕರಿಂದ ದೂರುಗಳೇನಾದರೂ ಬಂದಿವೆಯೇ; ಹೌದಾದಲ್ಲಿ, ಆ ಕುರಿತು ಸರ್ಕಾರದ ಕ್ರಮಗಳೇನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಈ ಸುತ್ತೋಲೆಯನ್ನು ಸಿಆಸು ಇಲಾಖೆಯ ದಿನಾಂಕ: 14.9.2001ರಂದು ಹೊರಡಿಸಿದೆ. ಸಮಾಜ ಕಲ್ಯಾಣ ಇಲಾಖೆಯಿಂದ ಹೊರಡಿಸಿರುವುದಿಲ್ಲ. ನೌಕರರ ವಿರುದ್ಧದ ಆರೋಪಗಳು ಇಲಾಖಾ ವಿಚಾರಣೆಯಲ್ಲಿ ಸಾಬೀತಾದಲ್ಲಿ ನಿಯಮಾನುಸಾರ ದಂಡನೆ ವಿಧಿಸುವುದರ ಬಗ್ಗೆ ಮೇಲಿನ ಸುತ್ತೋಲೆ ತಿಳಿಸುತ್ತದೆ.

ಆ) ಯಾವುದೇ ನಿರ್ದಿಷ್ಟ ಪ್ರಕರಣದಲ್ಲಿ ಹಣ ದುರುಪಯೋಗವಾಗಿರುವುದು ಕಂಡುಬಂದಿಲ್ಲ ಹಾಗೂ ಗುರುತಿಸಿರುವುದಿಲ್ಲ. ಆದ್ದರಿಂದ ಯಾವ ಪ್ರಕರಣಗಳಲ್ಲಿ ಎಷ್ಟು ಹಣ ದುರುಪಯೋಗವಾಗಿದೆ ಎಂಬ ಬಗ್ಗೆ ನಿಖರವಾಗಿ ಗುರುತಿಸಲು ಸಾಧ್ಯವಾಗುವುದಿಲ್ಲ.

ಇ) ಪರಿಶಿಷ್ಟಜಾತಿ/ವರ್ಗದವರ ಕಲ್ಯಾಣಕ್ಕಾಗಿ ಬಿಡುಗಡೆಗೊಂಡ ಹಣ ದುರುಪಯೋಗವಾಗಿರುವ ಬಗ್ಗೆ ಬಂದಂತಹ ಸಾರ್ವಜನಿಕ ದೂರುಗಳನ್ನು ಅಡಿಗಡಿಗೆ ತನಿಖೆ/ವಿಚಾರಣೆಗೆ ಒಳಪಡಿಸಲಾಗಿದೆ. ಆರೋಪಗಳು ಸಾಬೀತಾದಲ್ಲಿ ಸಿ.ಆ.ಸು. ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ.18. ಸೇಇವಿ. 2001, ದಿ: 14.9.2001ರ ಮೇರೆಗೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ರಾಜ್ಯದಲ್ಲಿ ಅಂಬೇಡ್ಕರ್ ಸಮಗ್ರ ಗ್ರಾಮೀಣಾಭಿವೃದ್ಧಿ ಯೋಜನೆಯ ಅನುಷ್ಠಾನದ ಬಗ್ಗೆ

4605 (5166) : ಶ್ರೀ ಚಿಕ್ಕನಗೌಡರ ಸಿದ್ದನಗೌಡ ಈಶ್ವರಗೌಡ (ಕಲಘಟಗಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಂಬೇಡ್ಕರ್ ಸಮಗ್ರ ಗ್ರಾಮೀಣಾಭಿವೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆಯೇ; ಯಾವಾಗಿನಿಂದ-ಅನುಷ್ಠಾನಗೊಳಿಸಲಾಗಿದೆ; (ಜಿಲ್ಲಾವಾರು ಹಾಗೂ ಧಾರವಾಡ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ವಿವರ ನೀಡುವುದು)?

ಆ) ಇದು ರಾಜ್ಯ ಅಥವಾ ಕೇಂದ್ರ ಸರ್ಕಾರದ ಯೋಜನೆಯೇ?

ಇ) ಇದಕ್ಕಾಗಿ ನಿಗಧಿಪಡಿಸಿರುವ ಹಣವೆಷ್ಟು; ಬಿಡುಗಡೆಯಾದ ಮೊತ್ತ ಎಷ್ಟು; ಯಾವಾಗ ಯೋಜನೆಯನ್ನು ಪೂರ್ಣಗೊಳಿಸಲಾಗುತ್ತದೆ?